(58)

<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನಾ ಸಿದ್ದಿ ಹಾಗೂ ಡಾ: ತಳವಾರ ಸಾಬಣ್ಣ ಇವರು ನಿಯಮ 72ರಡಿ ನೀಡಿರುವ ಸೂಚನೆಗೆ ಮಾಹಿತಿ</u>

ಸೂಚನೆ:-

ದಿನಾಂಕ 27-04-1978 ಪೂರ್ವದ ಅರಣ್ಯ ಅತಿಕ್ರಮಣ ಸಕ್ರಮಗೊಳಿಸಲು ಸರಕಾರವು ಸ್ಪಷ್ಟ ಮಾರ್ಗಸೂಚಿ ಹೊರಡಿಸಿದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 1832 ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳು ಸಕ್ರಮ ಆದೇಶ ಹೊರಡಿಸಿದ್ದು ಇರುತ್ತದೆ. ಹೀಗೆ ಸಕ್ರಮಗೊಳಿಸಿದ ಪ್ರಕರಣಗಳಲ್ಲಿ ಅತಿಕ್ರಮಣ ಜಮೀನು & ಅರಣ್ಯ ಅತಿಕ್ರಮಣ ಜಮೀನು ಕರ್ನಾಟಕ ಅರಣ್ಯ ಕಾಯ್ದೆ 1962 ಕಲಂ 28 ರಡಿ Disforest donatory ಆಗದೆ ಇರುವುದರಿಂದ ಪಹಣಿ ಪತ್ರಿಕೆಯಲ್ಲಿ ಮಂಜೂರಿದಾರರ ಹೆಸರಿಗೆ ಬದಲಾಗಿ ಈ ವರೆಗೆ ಅರಣ್ಯ ಇಲಾಖೆಯ ಹೆಸರೇ ಮುಂದುವರೆದಿರುತ್ತದೆ. ಇದರಿಂದ ಮಂಜೂರಿದಾರರು ಸರಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಆದ್ದರಿಂದ ರೈತರ ಸಮಸ್ಯೆಯನ್ನು ನಿವಾರಿಸುವ ದೃಷ್ಟಿಯಿಂದ ಹೀಗೆ Disforest donatory ಆಗದೆ ಇರುವ ಪ್ರಕರಣಗಳಲ್ಲಿ ಸರ್ಕಾರ ಸೂಕ್ತ ಪ್ರಸ್ತಾವನೆ ಸಲ್ಲಿಸಿ ಕ್ರಮಬದ್ಧಗೊಳಿಸುವ ಬಗ್ಗೆ.

ಉತ್ತರ:-

ದಿನಾಂಕ 27-04-1978ರ ಪೂರ್ವದ ಅರಣ್ಯ ಅತಿಕ್ರಮಣ ಸಕ್ರಮಗೊಳಿಸಲು ಸರ್ಕಾರವು ಸ್ಪಷ್ಟ ಮಾರ್ಗಸೂಚಿ ಹೊರಡಿಸಿದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯು ಒಟ್ಟು 2495 ಪ್ರಕರಣಗಳಲ್ಲಿ ಸಕ್ರಮಾತಿ ಆದೇಶ ಹೊರಡಿಸಿರುತ್ತದೆ. ಈ 2495 ಪ್ರಕರಣಗಳ ಪೈಕಿ 1386 ಪ್ರಕರಣಗಳಲ್ಲಿ ಈಗಾಗಲೇ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆ ಜಂಟಿ ಮೋಜಣಿ ಮಾಡಿ ಡಿ-ನೋಟಿಫಿಕೇಶನ್ ಪ್ರಸ್ತಾವನೆಗಳನ್ನು ಅರಣ್ಯ ಸಂರಕ್ಷಣಾಧಿಕಾರಿಗಳು (ಕಾರ್ಯಯೋಜನೆ) ಧಾರವಾಡ ರವರ ಕಚೇರಿಗೆ ಸಲ್ಲಿಸಲಾಗಿರುತ್ತದೆ. ಈಗಾಗಲೇ ಕಾರವಾರ ವಿಭಾಗದ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಅರಣ್ಯ ಕಾಯ್ದೆ, 1963ರ ಕಲಂ 28 ರನ್ವಯ ಡಿ-ನೋಟಿಫೈ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಬೆಂಗಳೂರು ಇವರಿಂದ ಅರಣ್ಯ ಇಲಾಖೆಗೆ ಸಲ್ಲಿಸಲಾಗಿದೆ. ಪ್ರಸ್ತಾವನೆಯು ಅರಣ್ಯ ಇಲಾಖೆಯಿಂದ ಅನುಮೋದನೆಯಾದ ಕೂಡಲೇ ಉಳಿದ ಪ್ರಕರಣಗಳನ್ನು ಡಿ-ನೋಟಿಫಿಕೇಶನ್ ಮಾಡಲು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿಯವರು ವರದಿ ಸಲ್ಲಿಸಿರುತ್ತಾರೆ. ಈ ಎಲ್ಲಾ ಪ್ರಕರಣಗಳು ಡಿ-ನೋಟಿಫಿಕೇಶನ್ ಆದ ಮೇಲೆ ಕಂದಾಯ ಅಧಿಕಾರಿಗಳು ಪಹಣಿ ಪತ್ರಿಕೆಯಲ್ಲಿ ಅವರ ಹೆಸರನ್ನು ಬದಲಾಯಿಸಲು ಕ್ರಮಕೈಗೊಳ್ಳಬಹುದಾಗಿರುತ್ತದೆ.

(ಕಡತ ಸಂಖ್ಯೆ: ಕಂಇ 23 ಎಲ್‌ಜಿಎನ್ 2024)

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು